# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಕಾರ್ಯದರ್ಶಿ, ವಾರ್ಡ್ ಸಮಿತಿ/ಸಹಾಯಕ ಅಭಿಯಂತರರ ಕಛೇರಿ, ದಯಾನಂದನಗರ ವಾರ್ಡ್–97**

**1ನೇ ಮುಖ್ಯ ರಸ್ತೆ. ಶ್ರೀರಾಂಪುರ ಪೋಲಿಸ್ ಠಾಣೆ ಹಿಂಭಾಗ, ದಯಾನಂದನಗರ**

---

***ಸಂ: ವಾ–97/ವಾ.ಸ/ಸಭಾನಡವಳಿ–05/20–21*** ***ದಿ:08.12.20***

**ಸಭೆಯ ನಡವಳಿಗಳು**

ದಿನಾಂಕ: 08.12.20 ಮಂಗಳವಾರ ಪೂರ್ವಾಹ್ನ 11.00 ಘಂಟೆಗೆ ವಾರ್ಡ್–97 ದಯಾನಂದನಗರದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ನಡೆಸಲಾಯಿತು.

ಶ್ರೀಮತಿ ಅಮೃತ ಸಾಯಿ ಸಮಿತಿಯ ಕಾರ್ಯದರ್ಶಿಗಳು ಹಾಗೂ ಸಂಚಾಲಕರು ವಾರ್ಡ್–97 ರವರು ಸಭೆಗೆ ಆಗಮಿಸಿರುವ ಎಲ್ಲರಿಗೂ ಸ್ವಾಗತ ಕೋರಿದರು. ನಂತರ ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಬಂದಿಸಿದಂತೆ ಹಾಗೂ ಕೋವಿಡ್–19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಗೆ ಆಗಮಿಸಿರುವ ಎಲ್ಲಾ ಅದೀಕಾರಿಗಳಿಗೆ ಸಹಾಯಕ ಅಭಿಯಂತರರು ಸಭೆಗೆ ಸ್ವಾಗತ ಕೋರುತ್ತಾ,ಸಭೆಯನ್ನು ಮುನ್ನಡೆಸಲಾಯಿತು.

**ಸಭೆಗೆ ಹಾಜರಿದ್ದವರು:**

1. ಶ್ರೀಮತಿ.ಅಮೃತ ಸಾಯಿ, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ ಸಮಿತಿ ಅಧ್ಯಕ್ಷರು.
2. ಶ್ರೀಮತಿ.ಅಮೃತ ಸಾಯಿ, ಕಾರ್ಯದರ್ಶಿ ಹಾಗೂ ಸಂಚಾಲಕರು.
3. ಶ್ರೀ.ಎನ್.ಕುಮಾರ್ ಸೂಪರ್‌ವೈಸರ್
4. ಶ್ರೀ.ಎನ್.ವೆಂಕಟೇಶ್. ಕಿರಿಯ ಆರೋಗ್ಯ ಪರಿವೀಕ್ಷಕರು(ಘನತ್ಯಾಜ್ಯ ನಿರ್ವಹಣೆ–ಬಿಬಿಎಂಪಿ)
5. ಶ್ರೀಮತಿ.ಮಾರಿಮುತ್ತು, ಸ್ಯಾನಿಟರಿ ದಫೇದಾರ್
6. ಶ್ರೀ.ಕಿರಣ್ ಕುಮಾರ್.ಹೆಚ್.ಸಿ,ಕಂದಾಯ ಪರೀವೀಕ್ಷಕರು.
7. ಶ್ರೀ.ಟಿ.ಆಂಜನೇಯ,ಹಿರಿಯ ಆರೋಗ್ಯ ಪರಿವೀಕ್ಷಕರು
8. ಶ್ರೀ.ಪ್ರಕಾಶ್.ವೈ.ಎನ್, ಕಿರಿಯ ಅಭಿಯಂತರರು, ಬೆಸ್ಕಾಂ

***ಸಭೆಯಲ್ಲಿ ಚರ್ಚಿಸಲಾದ ವಿಷಯಗಳು***

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರು ಸಮುಖದಲ್ಲಿ ವಾರ್ಡ್ ಸಂ:97 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರುತ್ತಾ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಂ ಸಂಬಂದಿಸಿದಂತೆ ಹಾಗೂ ಯಾವುದೇ ವಾರ್ಡ ಸದಸ್ಯರು ಉಪಸ್ಥಿತವಾಗದಿದ್ದ ಕರಣ ಹಿಂದಿನ ಸಭೆಯ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

Scanned with CamScanner

1. ಅಂಬೇಡ್ಕರ್ ಡೇ ಕೇರ್ ಸೆಂಟರ್ ಎದುರು ಇರುವ ಬ್ಲಾಕ್ ಪಾಯಿಂಟ್ ಸಮಸ್ಯೆಯನ್ನು ಬಗೆಹರಿಸಲಾಗಿದ್ದು, ಇನ್ನು ಮುಂದೆ ಕಸವನ್ನು ತೆಗೆದ ನಂತರ ಬ್ಲೀಚಿಂಗ್ ಪೌಡರ್ ಸಿಂಪಡಿಲಾಗುವುದೆಂದು ತಿಳಿಸಿದರು.
2. ಶ್ರೀರಾಂಪುರ ಎದುರು ಇರುವ ಹೈ ಮಾಸ್ಕ್ ಲೈಟ್ ಸರಿಪಡಿಸಿರುವುದಾಗಿ ವಾರ್ಡ ಗ್ಯಂಗ್‌ಮೆನ್ ತಿಳಿಸಿದರು.
3. ಬಂಡಿರೆಡ್ಡಿ ಸರ್ಕಲ್ ರಸ್ತೆ ಅಗೆತದ ಬಾಗವನ್ನು ಡಾಂಬರೀಕರಣ ಮಾಡಿಸಿರುವುದಾಗಿ ಕಾಮಗಾರಿ ಇಲಾಖೆ ಅಧಿಕಾರಿಗಳು ತಿಳಿಸಿದರು.
4. ಹಾಗೂ ಸಭೆಗೆ ಉಪಸ್ಥಿತರಾಗಿದ್ದ ಅಧಿಕಾರಿಗಳು ತಮಗೆ ಯಾವುದೇ ದೂರುಗಳು ಬಂದಿರುವುದಿಲ್ಲವೆಂದು ತಿಳಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಬೇರೆ ಯಾವ ಅಧಿಕಾರಿಗಳು ಸಭೆಗೆ ಹಾಜರಾಗದ ಕಾರಣ ಸಮಿತಿಯ ಅಧ್ಯಕ್ಷರು ಹಾಗೂ ನೋಡಲ್ ಅಧಿಕರಿಗಳು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Anu Lali

ನೋಡಲ್ ಅಧಿಕಾರಿಗಳು
ವಾರ್ಡ್ ಸಂ-97

ಪ್ರತಿಯನ್ನು:

1. ಮಾನ್ಯ ಆಯುಕ್ತರ ಆಪ್ತ ಸಹಾಯಕರಿಗೆ ಕಳುಹಿಸುತ್ತಾ ಮಾನ್ಯ ಆಯುಕ್ತರ ಗಮನಕ್ಕೆ ತರುವಂತೆ ಕೋರಿದೆ.
2. ವಿಶೇಷ ಆಯುಕ್ತರು ಆಡಳಿತ ರವರ ಅವಾಗಹನೆಗೆ ಸಲ್ಲಿಸಿದೆ.
3. ವಲಯ ಆಯುಕ್ತರು (ಪಶ್ಚಿಮ) ರವರ ಅವಾಗಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ಪಶ್ಚಿಮ) ರವರ ಅವಾಗಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿಗಳು ಹಾಗೂ ವಾರ್ಡ ಸಮಿತಿ ಅಧ್ಯಕ್ಷರು ರವರ ಅವಾಗಹನೆಗೆ ಸಲ್ಲಿಸಿದೆ.
6. ಕಛೇರಿ ಕಡತಕ್ಕೆ

Scanned with CamScanner